46. 2001ನೇ ಮಾರ್ಚ್ ಅಂತ್ಯದೊಳಗಾಗಿ 'ಸಕ್ಕರೆ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ ರೂ.30,37,05,000 ಮತ್ತು ಬಂಡವಾಳ ಲೆಕ್ಕದಲ್ಲಿ ರೂ.16,46,05,000 ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

47. 2001ನೇ ಮಾರ್ಚ್ ಅಂತ್ಯದೊಳಗಾಗಿ 'ಬಡ್ಡಿ ಸಂದಾಯ' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ ರೂ.1,000 ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

48. 2001ನೇ ಮಾರ್ಚ್ ಅಂತ್ಯದೊಳಗಾಗಿ 'ಆಂತರಿಕ ಋಣ, ಕೇಂದ್ರ ಸರ್ಕಾರದಿಂದ ಸಾಲ ಮತ್ತು ಮುಂಗಡಗಳು ಹಾಗೂ ರಾಜ್ಯ ತೀರುವಿಕೆಗಳು' ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ಬಂಡವಾಳ ಲೆಕ್ಕದಲ್ಲಿ ರೂ.8,00,00,000 ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

ಯಾಕೂಬ್ ಷರೀಫ್
ಕಾರ್ಯದರ್ಶಿ,
ಕರ್ನಾಟಕ ವಿಧಾನ ಸಭಾ ಸಚಿವಾಲಯ.

(2) ಶಾಸನ ರಚನೆ

(ಆ) ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ, 2001 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2001ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

" 2001ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2001ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ *